**CC 5125/2023**

**ಪ್ರಧಾನ ದಿವಾಣಿ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ಗಳ ನ್ಯಾಯಾಲಯ, ವಿಜಯನಗರ ಜಿಲ್ಲೆ, ಹೊಸಪೇಟೆ.**

**ಸಿಸಿ ನಂಬರ್** 5125/2023

**ಸಿ ಡಬ್ಲ್ಯೂ** 17
**ಪಿ ಡಬ್ಲ್ಯೂಃ** 8

| | |
|---|---|
| **ಸಾಕ್ಷಿಯ ಹೆಸರು -** | **ಎಸ್ ವಿರುಪಾಕ್ಷ** |
| **ತಂದೆಯ ಹೆಸರು -** | **ಸುಗಲಪ್ಪ** |
| **ವಯಸ್ಸು -** | 59 **ವರ್ಷಗಳು** |
| **ಉದ್ಯೋಗ -** | **ಎ ಎಸ್ ಐ, ಹಂಪಿ ಪ್ರವಾಸಿ ಪೋಲಿಸ್ ಠಾಣೆ** |
| **ವಾಸಸ್ಥಳ -** | **ಕಮಲಾಪುರ** |

**ಸಾಕ್ಷಿಯನ್ನು ದಿನಾಂಕಃ** 05-12-2025 **ರಂದು ಪ್ರಾಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎ. ಪಿ. ಪಿ. ಅವರಿಂದ**

ನಾನು **2022** ರಿಂದ ಹಂಪಿ ಪ್ರವಾಸಿ ಪೋಲಿಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ **24-06-2023** ರಂದು ನಾನು ಠಾಣೆಯಲ್ಲಿ ಇದ್ದಾಗ ಚಾಸಾ **-1** ರವರು ಠಾಣೆಗೆ ಹಾಜರಾಗಿ ನೀಡಿದ ದೂರನ್ನು ಸ್ವೀಕರಿಸಿ ಠಾಣಾ ಗುನ್ನೆ ಸಂಖ್ಯೆ **29/2023** ರಲ್ಲಿ ಪ್ರಕರಣ ದಾಖಲಿಸಿರುತ್ತೇನೆ. ಸಾಕ್ಷಿ ದೂರು ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿಃ **12** ಎಂದು ಗುರುತಿಸಲಾಗಿದೆ. ಸಾಕ್ಷಿಯ ಸಹಿಯನ್ನು ನಿಪಿಃ **1(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿ ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿಃ **6** ಎಂದು ಗುರುತಿಸಲಾಯಿತು. ಸಾಕ್ಷಿ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿಃ **6(ಎ)** ಎಂದು ಗುರುತಿಸಲಾಯಿತು. ಅದೇ ದಿನ ಮಧ್ಯಾಹ್ನ **12.00** ಗಂಟೆಗೆ ಚಾಸಾ **-1** ರವರು ಸಿಬ್ಬಂದಿಗಳೊಂದಗೆ ಮತ್ತು ಆರೋಪಿತರಾದ ಗೌತಮ್ ಮತ್ತು ಮಂಜುನಾಯಕ್ ರವರೊಗಾಂದಗೆ ಠಾಣೆಗೆ ಬಂದರು. ಸದರಿ ಆರೋಪಿತರನ್ನು, ಪಂಚನಾಮೆಯನ್ನು ಮತ್ತು

ವಶಪಡಿಸಿಕೊಂಡಿದ್ದ ಮುದ್ದೆಮಾಲನ್ನು ನನ್ನ ವಶಕ್ಕೆ ನೀಡಿದ್ದರು. ಮುದ್ದೆಮಾಲನ್ನು ಸ್ವತ್ತು ಪಟ್ಟಿಗೆ ಅಳವಡಿಸಿ ನ್ಯಾಯಾಲಯಕ್ಕೆ ವರದಿ ಮಾಡಿರುತ್ತೇನೆ. ಆರೋಪಿತರ ಸ್ವಖುಷಿ ಹೇಳಿಕೆ ಪಡೆದು ನಿಯಮಾನುಸಾರ ದಸ್ತಗಿರಿ ಮಾಡಿರುತ್ತೇನೆ. ಆರೋಪಿತರನ್ನು ನ್ಯಾಯಾಧೀಶರ ಮುಂದೆ ಹಾಜರು ಪಡಿಸಿರುತ್ತೇನೆ.

ಉಪ ಪೋಲಿಸ್ ಅಧೀಕ್ಷಕರ ಆದೇಶದ ಮೇರೆಗೆ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ -18 ರವರಿಗೆ ಹಸ್ತಾಂತರಿಸಿರುತ್ತೇನೆ. ಆರೋಪಿತರನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿ ನ್ಯಾಯಾಲಯದ ಮುಂದೆ ಇರುವ ಆರೋಪಿತರನ್ನು ನೋಡಿ ಗುರುತಿಸಿರುತ್ತಾರೆ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಟಿ.ಆರ್.ಪಿ ವಕೀಲರಿಂದ</u>**

ನನ್ನ ಮೇಲಾಧಿಕಾರಿಯ ಮಾಹಿತಿಯ ಮೇರೆಗೆ ಪ್ರಕರಣ ದಾಖಲಿಸಿರುತ್ತೇನೆ ಅಂದರೆ ಸರಿ . ನನಗೆ ಪ್ರಕರಣದ ಬಗ್ಗೆ ಖುದ್ದು ಮಾಹಿತಿ ಇಲ್ಲ ಅಂದರೆ ಸರಿಯಲ್ಲ. ಚಾಸಾ -1 ರವರು ಮಧ್ಯಾಹ್ನ 12.30 ಗಂಟೆಗೆ ಆರೋಪಿತರೊಂದಿಗೆ ಠಾಣೆಗೆ ಬಂದರು ಎಂದು ಸುಳ್ಳು ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ. ಆರೋಪಿತರನ್ನು ಚಾಸಾ -1 ರವರು ಠಾಣೆಗೆ ಕರೆದುಕೊಂಡು ಬಂದಾಗ ಬಂದಿಸಿರುತ್ತೇನೆ ಎಂದು ಸುಳ್ಳು ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ. ಆರೋಪಿತರ ನೀಡಿದ್ದರೂ ಎನ್ನಲಾದ ಸ್ವ ಖುಷಿ ಹೇಳಿಕೆಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಅಂದರೆ ಸರಿಯಲ್ಲ. ಆ ರೀತಿ ಯಾವುದೇ ಹೇಳಿಕೆಯನ್ನು ಆರೋಪಿತರು ನೀಡಿಲ್ಲ ಅಂದರೆ ಸರಿಯಲ್ಲ. ಪ್ರಕರಣದಲ್ಲಿ ಅನುಕೂಲವಾಗಲೀ ಎಂದು ಮುದ್ದೆಮಾಲನ್ನು ಸೃಷ್ಟಿಸಿ ಸ್ವತ್ತು ಪಟ್ಟಿ ತಯಾರಿಸಿರುತ್ತೇನೆ ಅಂದರೆ

ಸರಿಯಲ್ಲ. ಮೇಲಾಧಿಕಾರಿಗಳ ಒತ್ತಾಯದ ಮೇರೆಗೆ ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಅಂದರೆ ಸರಿಯಲ್ಲ.

**ಮರು ವಿಚಾರಣೆ- ಇಲ್ಲ.**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಪ್ರಧಾನ ದಿವಾಣಿ ನ್ಯಾಯಾಧೀಶರು ಹಾಗೂ
ಜೆ.ಎಂ.ಎಫ್.ಸಿ., ವಿಜಯನಗರ ಜಿಲ್ಲೆ, ಹೊಸಪೇಟೆ.